ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 15–11–2021**

ಮಾಧ್ಯಮ ಸಂಸ್ಥೆಗಳ ಗಮನಕ್ಕೆ :

ಭಾರತ ಚುನಾವಣಾ ಆಯೋಗ ಕರ್ನಾಟಕ ವಿಧಾನಪರಿಷತ್ ನ 25 ಸ್ಥಾನಗಳಿಗೆ ಚುನಾವಣೆಯನ್ನು ಘೋಷಿಸಿದ್ದು ಡಿಸೆಂಬರ್ 10 ರಂದು ಮತದಾನ ಹಾಗೂ 14 ರಂದು ಮತ ಎಣಿಕೆ ನಡೆಯಲಿದೆ.

ಪ್ರಸ್ತುತ ಚುನಾವಣೆಯ ವರದಿಗಾಗಿ ಮಾಧ್ಯಮ ಪ್ರತಿನಿಧಿಗಳಿಗೆ ಆಯೋಗ ಅಧಿಕೃತ ಪ್ರವೇಶ ಪತ್ರಗಳನ್ನು ನೀಡುತ್ತಿದ್ದು ತಮ್ಮ ಸಂಸ್ಥೆಯ ಪ್ರತಿನಿಧಿಗಳ ಪಟ್ಟಿಯನ್ನು (ಹೆಸರು, ಹುದ್ದೆ, ವಿಳಾಸ, ಮೊಬೈಲ್ ಸಂಖ್ಯೆ ಹಾಗೂ 3 ಪಾಸ್ಪೋರ್ಟ್ ಅಳತೆಯ ಭಾವಚಿತ್ರ) ದಿನಾಂಕ: 16-11-2021ರ ಸಂಜೆ 5 ಗಂಟೆಯ ಒಳಗಾಗಿ ವಾರ್ತಾ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ಸಲ್ಲಿಸಲು ತಿಳಿಸಿದೆ.

**ವಿ.ಸೂ: ಡಿಸೆಂಬರ್ 10 ರ ಮತದಾನದ ವರದಿಗಾಗಿ ಸಂಖ್ಯೆಯ ಮಿತಿ ಇರುವುದಿಲ್ಲ, ಡಿಸೆಂಬರ್ 14ರ ಮತ ಎಣಿಕೆ ಕೇಂದ್ರದ ವರದಿಗಾಗಿ ಮುದ್ರಣ ಮಾಧ್ಯಮ ಸಂಸ್ಥೆಗೆ ಒಬ್ಬರಿಗೆ ಹಾಗೂ ವಿದ್ಯುನ್ಮಾನ ಮಾಧ್ಯಮ ಸಂಸ್ಥೆಯ ಇಬ್ಬರು ಪ್ರತಿನಿಧಿಗಳಿಗೆ ಮಾತ್ರ ಅಧಿಕೃತ ಪ್ರವೇಶ ಪತ್ರಗಳನ್ನು ನೀಡಲು ಚುನಾವಣಾ ಆಯೋಗ ತನ್ನ ಆದೇಶದಲ್ಲಿ ತಿಳಿಸಿದೆ. ಇದರಂತೆ ಪಟ್ಟಿಯನ್ನು ಸಲ್ಲಿಸಲು ಕೋರಿದೆ.**

# ಮಾಧ್ಯಮ ಆಹ್ವಾನ
## MEDIA INVITATION

## ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ “ ಮಾಧ್ಯಮ ಕಂಡರೆ ಯಾರಿಗೆ ಭಯವಿಲ್ಲ?” ಕುರಿತು ವಿಚಾರ ಸಂಕಿರಣ

**ಉದ್ಘಾಟನೆ :**
ಜಿ. ಜಗದೀಶ್, ಐ.ಎ.ಎಸ್.
ಮಾನ್ಯ ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿಗಳು ಹಾಗೂ
ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ.

**ಮುಖ್ಯ ಅತಿಥಿ :**
ರಮೇಶ್ ಅರವಿಂದ್,
ಖ್ಯಾತ ನಟ ಮತ್ತು ನಿರ್ದೇಶಕರು

**ಅಧ್ಯಕ್ಷತೆ:**
ಸದಾಶಿವ ಶಣೈ. ಕೆ,
ಅಧ್ಯಕ್ಷರು, ಕರ್ನಾಟಕ ಮಾಧ್ಯಮ ಅಕಾಡೆಮಿ

**ನಿರೂಪಣೆ :**
**ಶಿವಾನಂದ ತಗಡೂರು**
**ಸದಸ್ಯರು ಕರ್ನಾಟಕ ಮಾಧ್ಯಮ ಅಕಾಡೆಮಿ**

**ದಿನಾಂಕ: : 16-11-2021, ಮಂಗಳವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ**

**ಸ್ಥಳ : ಕರ್ನಾಟಕ ಮಾಧ್ಯಮ ಅಕಾಡೆಮಿ ಕಚೇರಿ, ವಿ.ವಿ.ಕೇಂದ್ರ, ಬೆಂಗಳೂರು**

# ಪತ್ರಿಕಾ ಪ್ರಕಟಣೆ

**PRESS RELEASE**

## ಹೊಸ ಶಿಕ್ಷಣ ನೀತಿ-2020 ದೇಶದ ಅಭಿವೃದ್ಧಿ ಪೂರಕ : ವೆಂಕಯ್ಯನಾಯ್ಡು

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿ-2020 ಯನ್ನು ತಜ್ಞರ ಜೊತೆ ಸಮಾಲೋಚಿಸಿದ ನಂತರ ಜಾರಿಗೆ ತರಲಾಗಿದೆ. ಮುಂಬರುವ 5 ಜಿ ತಂತ್ರಜ್ಞಾನ ವಿವಿಧ ಕ್ಷೇತ್ರಗಳಲ್ಲಿ ತಾಂತ್ರಿಕ ಬದಲಾವಣೆಯನ್ನು ತರಲಿದೆ ಎಂದು ಭಾರತದ ಉಪರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ತಿಳಿಸಿದರು.

ಅವರು ಇಂದು ಬನಶಂಕರಿಯ ಪಿ.ಎ.ಎಸ್. ವಿಶ್ವವಿದ್ಯಾಲಯದ 6ನೇ ವಾರ್ಷಿಕ ಘಟಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ, ರ್‍ಯಾಂಕ್ ವಿಜೇತರಿಗೆ ಪದಕ ಪ್ರಧಾನ ಮಾಡಿ ಮಾತನಾಡುತ್ತಾ, ದೇಶವು 4ನೇ ಕೈಗಾರಿಕಾ ಕ್ರಾಂತಿಯನ್ನು ಎದುರಿಸುತ್ತಿದ್ದು, ಇಂದು ಬುದ್ಧಿಮತ್ತೆಯ ಮೇಲೆ ದೇಶದ ಆರ್ಥಿಕತೆ ನಿಂತಿದೆ. ಕೃಷಿಯಲ್ಲಿನ ಹೊಸ ಬೆಳಗವಣಿಗೆಯಿಂದ ದೇಶ ಪ್ರಗತಿ ಸಾಧಿಸುತ್ತಿದೆ. ಪಿ.ಇ.ಎಸ್. ವಿಶ್ವವಿದ್ಯಾಲಯ 2 ಉಪಗ್ರಹಗಳನ್ನು ಅಭಿವೃದ್ಧಿ ಪಡಿಸಿ ಡಿಆರ್‌ಡಿಓ ಹಾಗೂ ಇಸ್ರೋ ಸಹಾಯದಿಂದ ಉಡಾವಣೆ ನಡೆಸಿದೆ. ಇದೀಗ ಡ್ರೋನ್ ತಂತ್ರಜ್ಞಾನ ಸಹ ಆರ್ಥಿಕತೆಯ ಮೇಲೆ ಜೊತೆಗೆ ಕೃಷಿ, ಸಾರಿಗೆ, ಕಾನೂನು ಇನ್ನಿತರ ಕ್ಷೇತ್ರಗಳಿಗೆ ಸಕಾರಾತ್ಮಕ ಪರಿಣಾಮ ಬೀರಿವೆ.

ಪಿ.ಇ.ಎಸ್ ವಿಶ್ವವಿದ್ಯಾಲಯ ಕಳೆದ 5 ವರ್ಷಗಳಲ್ಲಿ ಸುಮಾರು 600 ಸಂಶೋಧನಾ ಲೇಖನಗಳನ್ನು ಪ್ರಕಟಿಸಿದ್ದು, 24 ಪೇಟೆಂಟ್‌ಗಳನ್ನು ಅಭಿವೃದ್ಧಿ ಪಡಿಸಿದೆ. ಅಲ್ಲದೆ ಈ ವಿಶ್ವವಿದ್ಯಾಲಯ, ಬೆಂಗಳೂರಿನ ಸುಮಾರು 40 ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಮುನ್ನಡೆಸುತ್ತಿದೆ. ಕೋವಿಡ್ ಸಂದರ್ಭದಲ್ಲಿ ಆರೋಗ್ಯ ಶಿಬಿರ, ಶಾಲೆ ಬಿಟ್ಟ ಮಕ್ಕಳಿಗೆ ಕೌಶಲ್ಯಾಭಿವೃದ್ಧಿ ಮುಂತಾದವುಗಳನ್ನು ನಡೆಸಿಕೊಂಡು ಬಂದಿದೆ ಎಂದರು.

ಯುವಜನತೆ ಹೆಚ್ಚು ಶಿಸ್ತು, ಬದ್ಧತೆ ಹಾಗೂ ಉತ್ಸಾಹದಿಂದ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಮುಂದುವರೆಯಬೇಕು ಅಲ್ಲದೆ ತಮ್ಮ ಕನಸುಗಳನ್ನು ಎತ್ತರವಾಗಿರಿಸಿ ಅದನ್ನು ಸಾಧಿಸಲು ಪಣ ತೊಡಬೇಕು. ದೇಶ ಸಹ ಕೋವಿಡ್ ನಿಯಂತ್ರಣ ಲಸಿಕಾ ಕಾರ್ಯಕ್ರಮ ಯಶಸ್ವಿಯಾಗಿ ನಡೆಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮತನಾಡಿದ ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಪಿ.ಇ.ಎಸ್ ವಿಶ್ವವಿದ್ಯಾಲಯ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ವಿಜ್ಞಾನ, ಶಿಕ್ಷಣ ಇನ್ನಿತರ ಕ್ಷೇತ್ರದಲ್ಲಿ ಕರ್ನಾಟಕ ಮಂಚೂಣಿಯಲ್ಲಿದೆ. ಪದವೀಧರರು ತಮ್ಮ ಕ್ಷೇತ್ರದಲ್ಲಿ ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಿಸಿ ಹೆಸರು ಗಳಿಸಬೇಕೆಂದರು.

ಕಾರ್ಯಕ್ರಮದಲ್ಲಿ ಪಿ.ಇ.ಎಸ್ ವಿಶ್ವವಿದ್ಯಾಲಯ ಕುಲಾಧಿಪತಿಗಳು ಹಾಗೂ ಸಂಸ್ಥಾಪಕರಾದ ಡಾ. ಎಂ.ಆರ್. ದೊರೆಸ್ವಾಮಿ ಮಾತನಾಡಿ, ಇಂದು ವಿಶ್ವವಿದ್ಯಾಲಯದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ 22 ಚಿನ್ನದ ಪದಕಗಳು, 78 ರ್‍ಯಾಂಕ್‌ಗಳನ್ನು ಉಪರಾಷ್ಟ್ರಪತಿಗಳು ಪ್ರದಾನ ಮಾಡಿದ್ದಾರೆ. ಈ ಸಾಧಕರು ನಮ್ಮ ದೇಶಕ್ಕೆ ಸಾಧನೆಯನ್ನು ಮಾಡಿ ಮುನ್ನೆಡೆಯಲಿ. ಈ ವರ್ಷ 2246 ವಿದ್ಯಾರ್ಥಿಗಳು ನಮ್ಮ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದುಕೊಂಡಿದ್ದಾರೆ. 1972 ರಲ್ಲಿ 45 ವಿದ್ಯಾರ್ಥಿಗಳಿಂದ

ಪ್ರಾರಂಭಗೊಂಡಿರುವ ವಿಶ್ವವಿದ್ಯಾಲಯದಲ್ಲಿ ಇಂದು 20,000 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಮುಂದಿನ ವರ್ಷ ಸಂಸ್ಥೆ ಸುವರ್ಣ ಮಹೋತ್ಸವ ಆಚರಿಸುತ್ತಿದ್ದು, ಇದರ ಹೊಸ ಕಟ್ಟಡವನ್ನು ಲೋಕಾರ್ಪಣೆಗೊಳಿಸಲಾಗುವುದು. 2013 ರಿಂದ ಇಲ್ಲಿಯವರೆಗೆ ವಿಶ್ವವಿದ್ಯಾಲಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಒಟ್ಟು ರೂ. 35 ಕೋಟಿಗಳ ಸ್ಕಾಲರ್‌ಶಿಫ್ ನೀಡಿದೆ ಎಂದರು.

ಕಾರ್ಯಕ್ರಮದಲ್ಲಿ ಸಚಿವ ಭೈರತಿ ಬಸವರಾಜ, ಪಿ.ಎ.ಎಸ್. ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳು ಹಾಗೂ ಸಿಇಓ ಪ್ರೋ.ಡಿ. ಜವಹರ್, ಕುಲಸಚಿವರಾದ ಡಾ.ಕೆ.ಎಸ್. ಶ್ರೀಧರ್ ಹಾಗೂ ಕುಲಪತಿಗಳಾದ ಡಾ.ಜೆ. ಸೂರ್ಯಪ್ರಸಾದ್ ಉಪಸ್ಥಿತರಿದ್ದರು.

## " ಮಾಧ್ಯಮ ಕಂಡರೆ ಯಾರಿಗೆ ಭಯವಿಲ್ಲ?" ಕುರಿತು ವಿಚಾರ ಸಂಕಿರಣ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ರಾಷ್ಟ್ರೀಯ ಪತ್ರಿಕಾ ದಿನಾಚರಣೆಯ ಅಂಗವಾಗಿ "ಮಾಧ್ಯಮ ಕಂಡರೆ ಯಾರಿಗೆ ಭಯವಿಲ್ಲ?" ಕುರಿತು ವಿಚಾರ ಸಂಕಿರಣವನ್ನು ದಿನಾಂಕ: 16-11-2021ರ ಬೆಳಿಗೆ 11.00 ಗಂಟೆಗೆ ವಿಶ್ವೇಶ್ವರಯ್ಯ ಕಿರು ಗೋಪುರದಲ್ಲಿರುವ ಮಾಧ್ಯಮ ಅಕಾಡೆಮಿಯ ಕಚೇರಿಯಲ್ಲಿ ಹಮ್ಮಿಹೊಳ್ಳಲಾಗಿದೆ.

ಮಾನ್ಯ ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತರಾದ ಜಿ. ಜಗದೀಶ್ ಐ.ಎ.ಎಸ್., ಅವರು ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದು, ಮುಖ್ಯ ಅತಿಥಿಗಳಾಗಿ ಖ್ಯಾತ ನಟ ಮತ್ತು ನಿರ್ದೇಶಕ ರಮೇಶ್ ಅರವಿಂದ್ ಭಾಗವಹಿಸಲಿದ್ದಾರೆ. ಕರ್ನಾಟಕದ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಕೆ. ಸದಾಶಿವ ಶಣೈ ಅಧ್ಯಕ್ಷತೆಯನ್ನು ವಹಿಸಲಿದ್ದು, ಸದಸ್ಯರಾದ ಶಿವನಂದ ತಗಡೂರು ಅವರು ಕಾರ್ಯಕ್ರಮದ ನಿರೂಪಣೆ ಮಾಡಲಿರುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬಯೊಲಜಿಸ್ಟ್ ಕೆಲಸ ನಿರ್ವಹಿಸಲು ನವೆಂಬರ್ 26ರಂದು ಸಂದರ್ಶನ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

ಶ್ರೀ ಚಾಮರಾಜೇಂದ್ರ ಮೃಗಾಲಯ, ಮೈಸೂರು ಇಲ್ಲಿ ಗುತ್ತಿಗೆ ಆಧಾರದಲ್ಲಿ ಬಯೊಲಜಿಸ್ಟಾಗಿ ಕೆಲಸ ನಿರ್ವಹಿಸಲು M.sc in "Forestry/Wildlife Management/Zoology/Wildlife Biology" ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ, 23 ರಿಂದ 28 ವರ್ಷ ವಯೋಮಿತಿಯೊಳಗಿನ ಒಬ್ಬರನ್ನು ಆರು ತಿಂಗಳ ಅವಧಿಗೆ ಮಾಸಿಕ ಕ್ರೋಢೀಕೃತ ವೇತನ ರೂ. 18,000/-ಗಳಿಗೆ ನೇಮಕ ಮಾಡಿಕೊಳ್ಳಲಾಗುವುದು.

ಅರ್ಹ ಆಸಕ್ತ ಅಭ್ಯರ್ಥಿಗಳು ನವೆಂಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರ ಕೊಠಡಿ, ಶ್ರೀ ಚಾಮರಾಜೇಂದ್ರ ಮೃಗಾಲಯ, ಮೈಸೂರು ಇಲ್ಲಿ ಮೂಲ ದಾಖಲಾತಿಗಳು ಹಾಗೂ ದೃಢೀಕೃತ ನಕಲು ಪ್ರತಿಯೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ವಿಧಾನ ಸಭೆಯ ಸಭಾಧ್ಯಕ್ಷರ ಶಿಮ್ಲಾ ಪ್ರವಾಸ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಶತಮಾನೋತ್ಸವ ಅಂಗವಾಗಿ ನವೆಂಬರ್ 16 ರಿಂದ 19ರ ವರೆಗೆ ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ನಡೆಯಲಿರುವ 82ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನದಲ್ಲಿ ಭಾಗವಹಿಸಲು ಪ್ರವಾಸ ಕೈಗೊಂಡಿರುತ್ತಾರೆ.

ಸಭಾಧ್ಯಕ್ಷರು, 82ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನದಲ್ಲಿ "ಶತಮಾನದ ಪಯಣ – ಮೌಲ್ಯಮಾಪನ ಮತ್ತು ಸಾಗಬೇಕಾದ ಮಾರ್ಗ" ಹಾಗೂ "ಸಂವಿಧಾನ, ಸದನ ಮತ್ತು ಜನತೆಯ ಅಭಿಮುಖವಾಗಿ ಪೀಠಾಸೀನಾಧಿಕಾರಿಗಳ ಹೊಣೆಗಾರಿಕೆಗಳು" ವಿಷಯಗಳ ಕುರಿತು ವಿಚಾರಧಾರೆಯನ್ನು ಮಂಡಿಸಲಿದ್ದಾರೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಗಡಿ ನಾಡು ಸಾಂಸ್ಕೃತಿಕ ಸಮ್ಮೇಳನ ಮುಂದೂಡಿಕೆ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

ದಿನಾಂಕ: 18-11-2021ರಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಕಾಸರಗೋಡಿನ ಎಡನೀರು ಮಠದ ಸಭಾಂಗಣದಲ್ಲಿ ನಡೆಸಲು ಉದ್ದೇಶಿಸಲಾಗಿದ್ದ "ಕರ್ನಾಟಕ ಗಡಿ ನಾಡು ಸಾಂಸ್ಕೃತಿಕ ಸಮ್ಮೇಳನ" ಕಾರ್ಯಕ್ರಮವನ್ನು ಚುನಾವಣಾ ನೀತಿ ಸಂಹಿತೆ ಇರುವುದರಿಂದ ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ, ಮುಂದಿನ ದಿನಾಂಕವನ್ನು ಸದ್ಯದಲ್ಲಿಯೇ ತಿಳಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಬಕಾರಿ ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

ಮಾನ್ಯ ಅಬಕಾರಿ ಹಾಗೂ ಹಾಸನ ಜಿಲ್ಲೆಯ ಉಸ್ತುವಾರಿ ಸಚಿವ ಕೆ. ಗೋಪಾಲಯ್ಯ ಅವರು ನವೆಂಬರ್ 16 ರಂದು ಹಾಸನ ಜಿಲ್ಲೆಯ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕೃಷಿ ಪ್ರಶಸ್ತಿಗೆ ರೈತರಿಂದ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ):

2021-22ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿ (ಬೆಳೆ ಸ್ಪರ್ಧೆ)ಗಾಗಿ ಭಾಗವಹಿಸಲಿಚ್ಛಿಸುವ ರೈತರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಲ್ಲಾ ಮಟ್ಟಗಳಿಗೂ (ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕೃಷಿ ಪ್ರಶಸ್ತಿಗೆ) ಅನ್ವಯಿಸುವಂತೆ ನಿಗದಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಪ್ರವೇಶ ಶುಲ್ಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ರೈತರಿಗೆ ರೂ. 25.00 ಮತ್ತು ಸಾಮಾನ್ಯ ರೈತರಿಗೆ ರೂ. 100.00.

2021-22ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ರೈತರು ಅರ್ಜಿ ಸಲ್ಲಿಸಲು 2021ರ ನವೆಂಬರ್ 30 ಕೊನೆಯ ದಿನಾಂಕವಾಗಿರುತ್ತದೆ. ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರನ್ನಾಗಲಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನಾಗಲಿ ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಠಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

**ದಿನಾಂಕ: 15.11.2021 (Average of past 24 hours)**

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 41 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | * | * | * |
| 3 | ಕವಿಕ, ಮೈಸೂರುರಸ್ತೆ | 100 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 81 | ತೃಪ್ತಿಕರ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 70 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 73 | ತೃಪ್ತಿಕರ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 42 | ಉತ್ತಮ | $PM_{10}$ |
| **(15.11.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 50 | ಉತ್ತಮ | $NO_2$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 15.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 41 | Good | $PM_{10}$ |
| 2 | Jayanagar 5th Block, Shalini ground | * | * | * |
| 3 | KAVIKA, Mysore Road | 100 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 81 | Satisfactory | CO |
| 5 | HSR Layout, near Central Silkboard | 70 | Satisfactory | CO |
| 6 | City Railway Station, Magestic, Bengaluru | 73 | Satisfactory | CO |
| 7 | Saneguruvanahalli, NisargaBhavan, KSPCB, Shivanagara | 42 | Good | $PM_{10}$ |
| **(15.11.2021 at 11.05 AM)** | | | | |
| 8 | BWSSB, Kadabesanahalli | 50 | Good | $NO_2$ |
| 9 | Peenya | * | * | * |
| 10 | BTM Layout | * | * | * |